All India Radio: Bangalore
Regional Bulletin In Kannada
14.06.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಗಗನಯಾತ್ರಿ ಶುಭಾಂಶು ಶುಕ್ಲಾ ಇದೇ ೧೯ರಂದು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ತೆರಳಲು ದಿನ ನಿಗದಿ - ಇಸ್ರೋ ಸ್ಪಷ್ಟನೆ
- ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ನಡೆಸಿದ ನೀಟ್ -೨೦೨೫ರ ಫಲಿತಾಂಶ ಪ್ರಕಟ
- ಕೃಷಿ ಸಂಸ್ಕರಣಾ ಘಟಕ ಸ್ಥಾಪಿಸುವ ರೈತರಿಗೆ ೧೫ ಲಕ್ಷ ರೂಪಾಯಿ ಸಹಾಯಧನ ನೀಡಲು ಸರ್ಕಾರ ನಿರ್ಧಾರ
- ಸರ್ಕಾರಕ್ಕೆ ಜಾತಿ ಜನಗಣತಿ ವಿಷಯವನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯುವ ಉದ್ದೇಶವಿಲ್ಲ - ಬಿಜೆಪಿ ಆರೋಪ
- ಸಾರ್ವಜನಿಕ ಹಿತದೃಷ್ಟಿ ಹಿನ್ನೆಲೆ ; ನಾಳೆಯಿಂದ ಆಗುಂಬೆ ಘಾಟಿಯಲ್ಲಿ ಭಾರೀ ವಾಹನ ಸಂಚಾರ ನಿರ್ಬಂಧ

<><><><>

ಅಮೆರಿಕ ಮೂಲದ ಆಕ್ಸಿಯಮ್ ಸ್ಪೇಸ್ ಇದೇ ೧೯ ರಂದು ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ ಅವರನ್ನು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಕರೆದೊಯ್ಯಲು ಸಜ್ಜಾಗಿದೆ ಎಂದು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಇಸ್ರೋ ಸ್ಪಷ್ಟಪಡಿಸಿದೆ. ಜೂನ್ ೧೧ ರಂದು ಉಡಾವಣೆಯಾಗಬೇಕಿದ್ದ ಶುಕ್ಲಾ ಬಾಹ್ಯಾಕಾಶ ಯಾನವನ್ನು ಹಲವು ಬಾರಿ ಮುಂದೂಡಲಾಗಿತ್ತು, ಆದರೆ ಐಎಸ್ಎಸ್ ನ ಜ್ವೆಜ್ಡಾ ಮಾಡ್ಯೂಲ್‌ಗೆ ಸಂಬಂಧಿಸಿದ ತಾಂತ್ರಿಕ ಸಮಸ್ಯೆಗಳಿಂದಾಗಿ ೨ ಬಾರಿ ಮುಂದೂಡಲಾಗಿತ್ತು. ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಜ್ವೆಜ್ಡಾ ಸೇವಾ ಮಾಡ್ಯೂಲ್‌ನಲ್ಲಿನ ಒತ್ತಡದ ಅಸಂಗತತೆಯನ್ನು ನಿರ್ಣಯಿಸಲು ಆಕ್ಸಿಯಮ್ ಸ್ಪೇಸ್ ನಾಸಾದೊಂದಿಗೆ ನಿಕಟವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಇಸ್ರೋ ತಿಳಿಸಿದೆ. 'ಇಸ್ರೋ, ಆಕ್ಸಿಯಮ್ ಸ್ಪೇಸ್ ಮತ್ತು ಸ್ಪೇಸ್‌ಎಕ್ಸ್ ನಡುವಿನ ಅನುಸರಣಾ ಸಮನ್ವಯ ಸಭೆಯಲ್ಲಿ, ಫಾಲ್ಕನ್

೯ ಉಡಾವಣಾ ವಾಹನದಲ್ಲಿ ಕಂಡುಬರುವ ದ್ರವ ಆಮ್ಲಜನಕ ಸೋರಿಕೆಯನ್ನು ಯಶಸ್ವಿಯಾಗಿ ಪರಿಹರಿಸಲಾಗಿದೆ ಎಂದು ಇಸ್ರೋ ದೃಢಪಡಿಸಿದೆ" ಎಂದು ತನ್ನ ಹೇಳಿಕೆಯಲ್ಲಿ ತಿಳಿಸಿದೆ.

<><><><>

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ವೈದ್ಯಕೀಯ ಪ್ರವೇಶ ಪರೀಕ್ಷೆ -ನೀಟ್ ೨೦೨೫ರ ಫಲಿತಾಂಶಗಳನ್ನು ಇಂದು ಪ್ರಕಟಿಸಿದೆ. ಅಂಕಪಟ್ಟಿಗಳು ಪರೀಕ್ಷೆಯ ಅಧಿಕೃತ ಜಾಲತಾಣ ಟಿಣಚಿಟಿಜಜಣ.ಟಿಛಿ.ಟಿ ನಲ್ಲಿ ಲಭ್ಯವಿದೆ. ಅಭ್ಯರ್ಥಿಗಳು ಅಂಕಪಟ್ಟಿಯನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು ಮತ್ತು ಅಧಿಕೃತ ಜಾಲತಾಣದ ಮೂಲಕ ಮೆರಿಟ್ ಪಟ್ಟಿಯನ್ನು ಪರಿಶೀಲಿಸಬಹುದು. ದೇಶಾದ್ಯಂತ ೨೨ ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದರು. ರಾಜಸ್ಥಾನದ ಮಹೇಶ್ ಕುಮಾರ್ ೭೨೦ ಅಂಕಗಳಲ್ಲಿ ೬೮೬ ಅಂಕಗಳಿಸುವ ಮೂಲಕ ಮೊದಲ ಸ್ಥಾನ ಪಡೆದ್ದಾರೆ. ಮಧ್ಯಪ್ರದೇಶ ಉತ್ಕರ್ಷ್ ಅವಾಧ್ಯ ೨ನೇ ಸ್ಥಾನ ಗಳಿಸಿದ್ದಾರೆ.

<><><><>

ಕೃಷಿ ಸಂಸ್ಕರಣಾ ಘಟಕ ಸ್ಥಾಪಿಸುವ ರೈತರಿಗೆ ಈ ವರ್ಷದಿಂದ ರಾಜ್ಯ ಸರ್ಕಾರ ೯ಲಕ್ಷ ರೂಪಾಯಿ ಮತ್ತು ಕೇಂದ್ರ ಸರ್ಕಾರ ೬ಲಕ್ಷ ಸೇರಿ ಒಟ್ಟು ೧೫ ಲಕ್ಷ ರೂಪಾಯಿ ಸಬ್ಸಿಡಿ ಹಣ ಸಿಗಲಿದೆ. ಇದಕ್ಕಾಗಿ ೨೦೬ ಕೋಟಿ ರೂಪಾಯಿ ಹಣವನ್ನು ಮೀಸಲಿರಿಸಲಾಗಿದೆ ಎಂದು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ. ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನ ದೇವಲಾಪುರ ಗ್ರಾಮದಲ್ಲಿ ರೈತ ಉತ್ಪಾದಕ ಕಂಪನಿಯ ನೂತನ ಕಟ್ಟಡ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಸಚಿವರು, ರೈತರು ಶ್ರದ್ಧೆ ಮತ್ತು ಪರಿಶ್ರಮದಿಂದ ವ್ಯವಸಾಯ ಮಾಡುವ ಪ್ರವೃತ್ತಿ ಮೈಗೂಡಿಸಿಕೊಳ್ಳಬೇಕು ಎಂದು ಕರೆ ನೀಡಿದ್ದಾರೆ. ಕೃಷಿ ಭೂಮಿಯನ್ನು ನಂಬಿ, ಬದ್ಧತೆ, ಆಸಕ್ತಿ ಮತ್ತು ಶ್ರಮದಿಂದ ವ್ಯವಸಾಯ ಮಾಡುವ ರೈತರಿಗೆ ಯಾವುದೇ ತೊಂದರೆಗಳು ಎದುರಾಗುವುದಿಲ್ಲ ಎಂದು ತಿಳಿಸಿದ್ದಾರೆ.

<><><><>

ದಾವಣಗೆರೆ ಜಿಲ್ಲಾ ಪಂಚಾಯತ್, ತೋಟಗಾರಿಕೆ ಇಲಾಖೆ ಸಹಯೋಗದೊಂದಿಗೆ ಇದೇ ೧೬ ರಿಂದ ೧೮ ರವರೆಗೆ ಹಮ್ಮಿಕೊಂಡಿರುವ ಮಾವು, ಹಲಸು ಮತ್ತು ಇತರೆ ಹಣ್ಣುಗಳ ಪ್ರದರ್ಶನ ಹಾಗೂ ಮಾರಾಟ ಮೇಳದ ಪೋಸ್ಟರನ್ನು ತೋಟಗಾರಿಕಾ ಸಚಿವ ಎಸ್.ಎಸ್ ಮಲ್ಲಿಕಾರ್ಜನ ಇಂದು ಬಿಡುಗಡೆ ಗೊಳಿಸಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು,

ತೋಟಗಾರಿಕಾ ಬೆಳೆಗಾರರ ಅನುಕೂಲಕ್ಕಾಗಿ ಹಾಗೂ ತೋಟಗಾರಿಕಾ ಬೆಳೆಗಳ ವ್ಯಾಪಾರೋದ್ಯಮ ಉತ್ತೇಜನಕ್ಕಾಗಿ ಮೇಳ ಆಯೋಜಿಸಲಾಗಿದೆ ಎಂದು ತಿಳಿಸಿದ್ದಾರೆ. ತೋಟಗಾರಿಕಾ ಬೆಳೆಗಳು ಹಾಗೂ ಉತ್ಪನಗಳ ಅಭಿವೃದ್ಧಿಗೆ ಪ್ರೋತ್ಸಾಹಿಸುವಂತೆ ಕರೆ ನೀಡಿದ್ದಾರೆ.

<><><><>

ರಾಜ್ಯ ಸರ್ಕಾರಕ್ಕೆ ಜಾತಿ ಜನಗಣತಿ ವಿಷಯವನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯುವ ಉದ್ದೇಶವಿಲ್ಲ ಎಂದು ಬಿಜೆಪಿ ಆರೋಪಿಸಿದೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, “ಮೊದಲು, ರಾಜ್ಯ ಸರ್ಕಾರ ಜಾತಿ ಜನಗಣತಿ ವಿಷಯದ ಬಗ್ಗೆ ಸ್ಪಷ್ಟ ನಿಲುವು ತೆಗೆದುಕೊಳ್ಳಲಿ” ಎಂದು ಆಗ್ರಹಿಸಿದ್ದಾರೆ. ಹೈಕಮಾಂಡ್‌ನ ಸೂಚನೆಗಳನ್ನು ಅನುಸರಿಸಿ ರಾಜ್ಯ ಸರ್ಕಾರ ಹೊಸ ಜಾತಿ ಜನಗಣತಿ ಸಮೀಕ್ಷೆಯನ್ನು ಘೋಷಿಸಿದೆ. ಈಗಾಗಲೇ ಜನಗಣತಿ ಮತ್ತು ಜಾತಿ ಜನಗಣತಿ ಎರಡಕ್ಕೂ ಕೇಂದ್ರ ಸರ್ಕಾರ ಯೋಜನೆಗಳನ್ನು ಘೋಷಿಸಿದೆ. ಜಾತಿ ಜನಗಣತಿ ನಡೆಸುವುದು ರಾಜ್ಯ ಸರ್ಕಾರದ ವ್ಯಾಪ್ತಿಗೆ ಬರುತ್ತದೆಯೇ ಎಂಬ ಬಗ್ಗೆ ಗೊಂದಲವಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ. ೧೬ನೇ ಹಣಕಾಸು ಆಯೋಗದ ಸಭೆಯಲ್ಲಿ ಭಾಗವಹಿಸಿರುವ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ವಿಜಯೇಂದ್ರ ಅಭಿನಂದಿಸಿದ್ದಾರೆ.

<><><><>

ರಾಷ್ಟ್ರೀಯ ಹೆದ್ದಾರಿ ೧೬೯ಎ ಯ ಆಗುಂಬೆ ಘಾಟಿಯಲ್ಲಿ ನಿರಂತರ ಮಳೆ ಮತ್ತು ಭಾರಿ ವಾಹನಗಳ ಓಡಾಟದಿಂದ ಅಲ್ಲಲ್ಲಿ ರಸ್ತೆ ಪಕ್ಕ ಭೂಕುಸಿತ ಆಗುವ ಸಂಭವವಿದೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಆಗುಂಬೆ ಘಾಟಿಯ ಮೂಲಕ ನಾಳೆಯಿಂದ ಸೆಪ್ಟಂಬರ್ ೩೦ ರವರೆಗೆ ಲಘು ವಾಹನ ಸಂಚಾರಕ್ಕೆ ಮಾತ್ರ ಅನುವು ಮಾಡಿ, ಭಾರಿ ವಾಹನ ಸಂಚಾರವನ್ನು ನಿರ್ಬಂಧಿಸಿ ಜಿಲ್ಲಾಧಿಕಾರಿ ಡಾ. ಕೆ.ವಿದ್ಯಾಕುಮಾರಿ ಆದೇಶಿಸಿದ್ದಾರೆ. ಉಡುಪಿಯಿಂದ ತೀರ್ಥಹಳ್ಳಿಗೆ ಸಂಚರಿಸುವ ಭಾರಿ ವಾಹನಗಳು ಬದಲಿ ಮಾರ್ಗವಾಗಿ ಉಡುಪಿ-ಕುಂದಾಪುರ-ಸಿದ್ಧಾಪುರ-ಮಾಸ್ತಿಕಟ್ಟೆ-ತೀರ್ಥಹಳ್ಳಿ ಮಾರ್ಗವಾಗಿ ಸಂಚರಿಸುವಂತೆ ಜಿಲ್ಲಾಧಿಕಾರಿಗಳ ಆದೇಶದಲ್ಲಿ ತಿಳಿಸಲಾಗಿದೆ.

<><><><>

ಮಳೆಯಿಂದಾಗುವ ಅನಾಹುತಗಳ ಬಗ್ಗೆ, ಸಾರ್ವಜನಿಕರ ಸಮಸ್ಯೆಗಳಿಗೆ ತುರ್ತು ಸ್ಪಂದಿಸುವ ಹಾಗೂ ಹಾನಿಗಳನ್ನು ತಡೆಗಟ್ಟುವ ಸಂಪೂರ್ಣ ಜವಾಬ್ದಾರಿ ವಿಪತ್ತು ನಿರ್ವಹಣಾ ಕೇಂದ್ರದ ಮೇಲಿದೆ ಎಂದು ಉತ್ತರಕನ್ನಡ ಅಪರ ಜಿಲ್ಲಾಧಿಕಾರಿ ಸಾಜೀದ್ ಮುಲ್ಲಾ ತಿಳಿಸಿದ್ದಾರೆ. ಕಾರವಾರದಲ್ಲಿ ವಿಪತ್ತು ಸಂದರ್ಭದಲ್ಲಿ ಸಾರ್ವಜನಿಕರ ಸಮಸ್ಯೆಗಳಿಗೆ ತುರ್ತು ಸ್ಪಂದನೆ ನೀಡುವ ಕುರಿತು, ವಿಪತ್ತು ನಿರ್ವಹಣಾ ಕೇಂದ್ರದಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗೆ ಆಯೋಜಿಸಲಾದ ತರಬೇತಿ ಉದ್ದೇಶಿಸಿ ಅವರು ಮಾತನಾಡಿದರು. ಪ್ರಾಕೃತಿಕ ವಿಕೋಪದ ಸಂದರ್ಭಗಳಲ್ಲಿ ಸಾರ್ವಜನಿಕರ ಸಮಸ್ಯೆಗಳಿಗೆ ತುರ್ತಾಗಿ ಸ್ಪಂದಿಸಲು ಉತ್ತರ ಕನ್ನಡ ಜಿಲ್ಲೆಯಲ್ಲಿ ೧೨ ತಾಲೂಕುಗಳಲ್ಲಿ ತುರ್ತು ವಿಪತ್ತು ನಿರ್ವಹಣಾ ಕೇಂದ್ರಗಳನ್ನು ತೆರೆಯಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><><>

ಇಂದು ವಿಶ್ವ ರಕ್ತದಾನಿಗಳ ದಿನ. ಪ್ರತಿವರ್ಷ ಜೂನ್ ೧೪ ರಂದು ವಿಶ್ವ ರಕ್ತದಾನಿಗಳ ದಿನ ಆಚರಿಸಲಾಗುತ್ತದೆ. ರಕ್ತದಾನದ ಮಹತ್ವ ತಿಳಿಸಲು ಮತ್ತು ಸ್ವಯಂಪ್ರೇರಿತವಾಗಿ ರಕ್ತದಾನ ಮಾಡಲು ಜನರನ್ನು ಜಾಗೃತಗೊಳಿಸುವುದು ವಿಶ್ವ ರಕ್ತದಾನಿಗಳ ದಿನ ಆಚರಣೆಯ ಉದ್ದೇಶ. ೧೮ ರಿಂದ ೬೫ ವರ್ಷದೊಳಗಿನ ಆರೋಗ್ಯವಂತ ಪುರುಷರು ಪ್ರತಿ ಮೂರು ತಿಂಗಳಿಗೊಮ್ಮೆ, ಮಹಿಳೆಯರು ನಾಲ್ಕು ತಿಂಗಳಿಗೊಮ್ಮೆ ರಕ್ತದಾನ ಮಾಡಬಹುದು. ರಕ್ತದಾನದ ನಂತರ ದಾನಿಗಳ ದೇಹದಲ್ಲಿ ರಕ್ತ ಪುನರ್ ಉತ್ಪತ್ತಿಯಾಗಲಿದೆ. ರಕ್ತವನ್ನು ಕೃತಕವಾಗಿ ತಯಾರಿಸಲು ಸಾಧ್ಯವಿಲ್ಲ. ಹೀಗಾಗಿ ನಾಗರಿಕರು ಸ್ವಯಂಪ್ರೇರಿತವಾಗಿ ರಕ್ತದಾನ ಮಾಡಲು ಮುಂದಾಗುವುದರಿಂದ ರಕ್ತದ ತ್ವರಿತ ಅಗತ್ಯವಿರುವ ಜೀವಗಳನ್ನು ಉಳಿಸಬಹುದು.

<><><>

ವಿಶ್ವ ಯೋಗ ದಿನಾಚರಣೆಯ ಅಂಗವಾಗಿ ನಡೆಯುವ ಯೋಗೋತ್ಸವ ಕಾರ್ಯಕ್ರಮದಲ್ಲಿ ವಿವಿಧ ಪದವಿಪೂರ್ವ ಕಾಲೇಜು, ಪ್ರೌಢಶಾಲೆ, ವಿವಿಧ ವಸತಿ ನಿಲಯಗಳು ಸೇರಿದಂತೆ ವಿವಿಧ ಶಾಲಾ-ಕಾಲೇಜಿನ ೨ ಸಾವಿರ ವಿದ್ಯಾರ್ಥಿಗಳು ಭಾಗವಹಿಸಲು ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ವಿಜಯಪುರ ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚನೆ ನೀಡಿದ್ದಾರೆ. ಮಕ್ಕಳ ದೈಹಿಕ ಹಾಗೂ ಮಾನಸಿಕ ಸದೃಢತೆಗೆ ಯೋಗದ ಕುರಿತು ಅರಿವು ಮೂಡಿಸುವ ನಿಟ್ಟಿನಲ್ಲಿ ಜಿಲ್ಲಾಡಳಿತ, ಕರ್ನಾಟಕ

ಬಾಲವಿಕಾಸ ಅಕಾಡೆಮಿ ಹಾಗೂ ಆಯುಷ್ ಇಲಾಖೆ ಸಹಯೋಗದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆಯೊಂದಿಗೆ ಇದೇ ೨೧ರಂದು ನಡೆಯಲಿದೆ.

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ತೀವ್ರ ಅತಿಸಾರದಿಂದ ಮಕ್ಕಳ ಮರಣವನ್ನು ಶೂನ್ಯಕ್ಕೆ ತರುವುದನ್ನು ಗುರಿಯಾಗಿಸಿ, ಅತಿಸಾರ ನಿಲ್ಲಿಸಿ ಅಭಿಯಾನ-೨೦೨೫ ಅನ್ನು ಇದೇ ೧೬ ರಿಂದ ಜುಲೈ ೩೧ ರವರೆಗೆ ನಡೆಸಲಾಗುತ್ತಿದೆ. ತೀವ್ರ ಅತಿಸಾರದಿಂದ ಬಳಲುತ್ತಿರುವ ಜನಸಾಮಾನ್ಯರಲ್ಲಿ, ವಿಶೇಷವಾಗಿ ಪೋಷಕರು ಮತ್ತು ಮಕ್ಕಳಲ್ಲಿ, ಪರಿಸರ ನೈರ್ಮಲ್ಯ, ಕೈ ತೊಳೆಯುವ ಸರಿಯಾದ ವಿಧಾನ, ಓ.ಆರ್.ಎಸ್. ತಯಾರಿಕೆ ಹಾಗೂ ವೈಯಕ್ತಿಕ ಶುಚಿತ್ವ ಕುರಿತಂತೆ ಆಶಾ ಕಾರ್ಯಕರ್ತೆಯರು ಮನೆ ಮನೆ ಭೇಟಿ ನೀಡಿ ಅರಿವು ಮೂಡಿಸಲಿದ್ದಾರೆ. ಕಾರ್ಯಕ್ರಮವನ್ನು ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಕೃಷ್ಣ ರೆಡ್ಡಿ ತಿಳಿಸಿದ್ದಾರೆ.

<><><><>

ರಾಮನಗರ ಜಿಲ್ಲೆಯಲ್ಲಿ ನಕಲಿ ವೈದ್ಯರು ಕಾರ್ಯನಿರ್ವಹಿಸುತ್ತಿರುವುದು ಕಂಡುಬಂದಲ್ಲಿ ನಾಗರೀಕರು ಸಂಬಂಧಿಸಿದ ತಾಲ್ಲೂಕು ಆರೋಗ್ಯಾಧಿಕಾರಿಗಳಿಗೆ ಮಾಹಿತಿ ನೀಡಿ, ನಕಲಿ ವೈದ್ಯರನ್ನು ಪತ್ತೆ ಹಚ್ಚಲು ಸಹಕರಿಸುವಂತೆ ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ತಿಳಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಆರೋಗ್ಯ ಇಲಾಖೆಯ ಅಧಿಕಾರಿಗಳು ನಕಲಿ ವೈದ್ಯರನ್ನು ಪತ್ತೆ ಮಾಡಲು ಅಗತ್ಯವಿರುವ ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚಿಸಿದ್ದಾರೆ. ಮುಂಗಾರು ಆರಂಭಗೊಂಡಿದ್ದು, ಕುಡಿಯುವ ನೀರು ಕಲುಷಿತಗೊಳ್ಳದಂತೆ ಎಚ್ಚರ ವಹಿಸಬೇಕು. ಇಲ್ಲವಾದಲ್ಲಿ ಸಂಬಂಧಪಟ್ಟ ವೈದ್ಯರು ಮತ್ತು ಅಧಿಕಾರಿಗಳ ಮೇಲೆ ಕ್ರಮವಹಿಸುವುದಾಗಿ ಜಿಲ್ಲಾಧಿಕಾರಿ ಎಚ್ಚರಿಕೆ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>